ಕರ್ನಾಟಕ ವಿಧಾನಪರಿಷತ್ತು

ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

ಚುಕ್ಕೆ ರಹಿತ ಪ್ರಶ್ನೆ

ದಿನಾಂಕ : 09-03-2021 ಪ್ರಶ್ನೆ ಸಂಖ್ಯೆ : 701(871)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಕೆ. ಪ್ರತಾಪ್ರಚಂದ್ರ ಶೆಟ್ಟಿ(ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರ ನೀಡಬೇಕಾದ ದಿನಾಂಕ : 09-03-2021

ಉತ್ತರಿಸುವ ಸಚಿವರು: ಮಾನ್ಯ ನಗರಾಭಿವೃದ್ಧಿ ಸಚಿವರು

ವಿಷಯ : ಉಡುಪಿ ನಗರಕ್ಕೆ ಕುಡಿಯುವ ನೀರು ಪೂರೈಸುವ ಕುರಿತು

(ಅ) ಉಡುಪಿ ನಗರಕ್ಕೆ ವಾರಾಹಿಯಿಂದ ಕುಡಿಯುವ ನೀರನ್ನು ಪೂರೈಸುವ ಯೋಜನೆಯ ಒಟ್ಟು ಅಂದಾಜು ವೆಚ್ಚವೆಷ್ಟು; ಬಿಡುಗಡೆಯಾದ ಅನುದಾನವೆಷ್ಟು; ಬಿಡುಗಡೆಗೆ ಬಾಕಿಯಿರುವ ಅನುದಾನವೆಷ್ಟು; ಈ ಯೋಜನೆಯು ಯಾವ ಯಾವ ಕಾಮಗಾರಿಗಳನ್ನು ಒಳಗೊಂಡಿರುತ್ತದೆ; ಇವುಗಳ ಟೆಂಡರ್ ಪ್ರಕ್ರಿಯೆಯನ್ನು ಪೂರ್ಣಗೊಳಿಸಲಾಗಿದೆಯೇ; (ಟೆಂಡರ್‌ನ್ನು ಪಡೆದ ಗುತ್ತಿಗೆದಾರರ ಹೆಸರು ಮತ್ತು ವಿಳಾಸವನ್ನು ನೀಡುವುದು)

(ಆ) ಈ ಯೋಜನೆಯಲ್ಲಿ ಟೆಂಡರ್ ನಿಯಮಾವಳಿಗೆ ಅನುಗುಣವಾಗಿ ಕಾಮಗಾರಿ ನಿರ್ವಹಿಸದೇ ಇರುವುದು ಹಾಗೂ ಕಳಪೆ ಗುಣಮಟ್ಟದ ಕಾಮಗಾರಿಗಳು ನಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಕಾಮಗಾರಿಯ ಗುಣಮಟ್ಟವನ್ನು ಕಾಪಾಡುವ ದೃಷ್ಠಿಯಿಂದ ಇಲಾಖೆಯಿಂದ ಕೈಗೊಂಡ ಕ್ರಮಗಳು ಯಾವುವು; ಕಾಮಗಾರಿ ಗುಣಮಟ್ಟ ನಿಯಂತ್ರಣಕ್ಕಾಗಿ ನಿಯೋಜಿಸಿದ ಅಧಿಕಾರಿಯ ಹೆಸರು ಮತ್ತು ಪದನಾಮ ಒದಗಿಸುವುದು;

(ಇ) ಸಬ್ ಲೀಸ್ ನೀಡಬಾರದು ಎಂಬ ನಿಬಂಧನೆ ಇದ್ದರೂ ಸಬ್ ಲೀಸ್ ನೀಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಕೈಗೊಂಡ ಕ್ರಮಗಳಾವುವು; ಈ ಯೋಜನೆಯನ್ನು ಪೂರ್ಣಗೊಳಿಸಲು ಗುತ್ತಿಗೆದಾರರಿಗೆ ನೀಡಿದ ಕಾಲಮಿತಿ ಯಾವುದು; ನಿಗದಿತ ಕಾಲದೊಳಗೆ ಪೂರ್ಣಗೊಳಿಸಲು ಇಲಾಖೆಯ ಕ್ರಮಗಳು ಯಾವುವು?